## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 846 |
| ಸದಸ್ಯರ ಹೆಸರು | ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 09.03.2021 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಬಳ್ಳಾಪುರ ಜಿಲ್ಲೆ, ಗುಡಿಬಂಡೆ ತಾಲ್ಲೂಕಿನ ನಾಗವಲ್ಲಿಯ ಗಣಿಯಲ್ಲಿ ಜಿಲೆಟಿನ್ ಸ್ಫೋಟದಿಂದ ಅನಾಹುತ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ದುರಂತದಲ್ಲಿ ಆಗಿರುವ ಪ್ರಾಣಹಾನಿ ಹಾಗೂ ಇತರೆ ನಷ್ಟ ಎಷ್ಟು; (ವಿವರ ನೀಡುವುದು) | ಬಂದಿರುತ್ತದೆ.<br>ಸ್ಫೋಟಕ ದುರಂತದಲ್ಲಿ ಆರು ಜನರು ಮೃತಪಟ್ಟಿದ್ದು, ನಷ್ಟದ ಕುರಿತು ಮಾಹಿತಿ ಇರುವುದಿಲ್ಲ. |
| ಆ) | ಈ ದುರಂತಕ್ಕೆ ಕಾರಣ ಏನು; | ಚಿಕ್ಕಬಳ್ಳಾಪುರ ಜಿಲ್ಲೆ, ಗುಡಿಬಂಡೆ ತಾಲ್ಲೂಕು, ಹಿರೇನಾಗವಲ್ಲಿ ಗ್ರಾಮದಲ್ಲಿ ದಿನಾಂಕ 23.02.2021 ರಂದು ಸ್ಫೋಟಕ ಘಟನೆ ಸಂಬಂಧ ಗುಡಿಬಂಡೆ ಪೋಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ 0034/2021ನ್ನು ದಿನಾಂಕ 23.02.2021 ದಾಖಲಿಸಲಾಗಿದ್ದು, ಸದರಿ ಮೊಕದ್ದಮೆಯಲ್ಲಿ ನಮೂದಿಸಿರುವ ಮಾಹಿತಿಯಂತೆ ಕಲ್ಲುಗಣಿ ಗುತ್ತಿಗೆ ಪ್ರದೇಶದಲ್ಲಿ ದಾಸ್ತಾನು ಮಾಡಲಾಗಿದ್ದ ಸ್ಫೋಟಕಗಳನ್ನು ನಾಶಪಡಿಸುವ ಸಂದರ್ಭದಲ್ಲಿ ಸ್ಫೋಟವು ಸಂಭವಿಸಿರುವುದು ಕಂಡುಬಂದಿರುತ್ತದೆ. |
| ಇ) | ಇಂತಹ ಅನಾಹುತಗಳು ಮರುಕಳಿಸದಂತೆ ಸರ್ಕಾರ ತೆಗೆದುಕೊಂಡ ಮುನ್ನೆಚ್ಚರಿಕೆಯ ಕ್ರಮಗಳೇನು? | • ರಾಜ್ಯ ವ್ಯಾಪ್ತಿಯಲ್ಲಿನ DGMS ನಿಂದ ಅನುಮತಿ ಪಡೆದು ಗಣಿ ಸುರಕ್ಷತಾ ನಿಯಮಗಳನ್ವಯ ಕಲ್ಲುಗಣಿಗುತ್ತಿಗೆ ಪ್ರದೇಶದಲ್ಲಿ ಕಾರ್ಯ ನಿರ್ವಹಿಸುವುದನ್ನು ಕಡ್ಡಾಯಗೊಳಿಸಲಾಗಿರುತ್ತದೆ.<br>• ಜಿಲ್ಲಾ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಅಕ್ರಮ ಸ್ಫೋಟಕಗಳ ಸಂಗ್ರಹ, ಬಳಕೆ ಮತ್ತು ಸಾಗಾಣಿಕೆ ಮಾಡುವ ಹಾಗೂ ಸಮಗ್ರ ಗಣಿಗಾರಿಕೆ ಬಗ್ಗೆ ಜಂಟಿಯಾಗಿ ತಪಾಸಣೆ ನಡೆಸಿ ಆಡಿಟ್ ಮಾಡಿ ವರದಿಯನ್ನು ಸಿದ್ಧಪಡಿಸಿ, ತಪ್ಪಿತಸ್ಥ ಗುತ್ತಿಗೆದಾರರ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುವುದು.<br>• ರಾಜ್ಯ ವ್ಯಾಪ್ತಿಯಲ್ಲಿ ಕಲ್ಲುಗಣಿ ಸುರಕ್ಷತೆ ಮತ್ತು ಅನಧಿಕೃತ ಗಣಿಗಾರಿಕೆ ತಡೆ ಮಾಸಿಕ ಸಪ್ತಾಹವನ್ನು ಆಚರಿಸಲು ಕ್ರಮ ಕೈಗೊಳ್ಳಲಾಗಿದೆ.<br>• ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ಬಾಕಿ ಇರುವ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಲು ಪ್ರತಿ ತಿಂಗಳು ಮೊದಲನೇ ಶನಿವಾರ ವಿಭಾಗವಾರು ಗಣಿ ಅದಾಲತ್ ನಡೆಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ ಸಿಐ 124 ಎಂಎಂಎನ್ 2021

(ಮುರುಗೇಶ್ ಆರ್. ನಿರಾಣಿ)
ಗಣಿ ಮತ್ತು ಭೂವಿಜ್ಞಾನ ಸಚಿವರು.